ಕರ್ನಾಟಕ ವಿಧಾನಸಭೆ

(ಹದಿನಾಲ್ಕನೇ ವಿಧಾನಸಭೆ)

ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 14ನೇ ಫೆಬ್ರವರಿ, 2017

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:–

ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

2. ವರದಿಗಳನ್ನೊಪ್ಪಿಸುವುದು

ಶ್ರೀ.ಕಿಮ್ಮನೆ ರತ್ನಾಕರ್ (ಅಧ್ಯಕ್ಷರು, ಹಕ್ಕುಬಾಧ್ಯತೆಗಳ ಸಮಿತಿ) ಅವರು:– 2016–17ನೇ ಸಾಲಿನ ಹಕ್ಕುಬಾಧ್ಯತೆಗಳ ಸಮಿತಿಯ 3ನೇ, 4ನೇ ಮತ್ತು 5ನೇ ವರದಿಗಳನ್ನು ಒಪ್ಪಿಸುವುದು.

3. ಅರ್ಜಿಗಳನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು ಈ ಕೆಳಕಂಡ ಅರ್ಜಿಗಳನ್ನು ಒಪ್ಪಿಸುವುದು.

1. ಮಂಡ್ಯ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಸುಮಾರು 25 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ ನೌಕರರನ್ನು ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ–2012ರಡಿ ಪರಿಗಣಿಸಿ ಸೇವಾ ಸೌಲಭ್ಯಗಳನ್ನು ನೀಡುವ ಬಗ್ಗೆ.

–2–

2. ಚನ್ನಪಟ್ಟಣ ತಾಲ್ಲೂಕು, ವಿರುಪಾಕ್ಷಿಪುರ ಹೋಬಳಿ, ಅಕ್ಕೂರು ಗ್ರಾಮದಲ್ಲಿ ಒತ್ತುವರಿಯಾದ ವೀರಶೈವ ಜನಾಂಗದ ಸ್ಮಶಾನದ ಜಾಗವನ್ನು ಮಂಜೂರು ಮಾಡಿಸಿಕೊಡುವ ಬಗ್ಗೆ.

3. ಬೆಳಗಾವಿ ಜಿಲ್ಲೆ, ಬೈಲಹೊಂಗಲ ತಾಲ್ಲೂಕು, ಬೆಳವಡಿ ಗ್ರಾಮದ ಜನತಾ ಕಾಲೋನಿ ಬಳಿ ಕಾನೂನು ಬಾಹಿರವಾಗಿ (Pugmill/Hotmix Plant) ಜಲ್ಲಿ ಕಲ್ಲುಗಳನ್ನು ಸಂಗ್ರಹಿಸಿರುವುದನ್ನು ಸ್ಥಳಾಂತರಿಸುವ ಬಗ್ಗೆ.

4. ಬೆಂಗಳೂರಿನ ಹೇರೋಹಳ್ಳಿ ವಾರ್ಡ್‌ನ ಮಾರುತಿನಗರ, ಪ್ರಸನ್ನ ಲೇಔಟ್ (ಶಿವಕೃಪ ಹಾಸ್ಟೆಲ್ ಹತ್ತಿರ) ಮಹದೇಶ್ವರನಗರ ಮುಖ್ಯ ರಸ್ತೆಯ ಬದಿಯಲ್ಲಿರುವ ಟ್ರಾನ್ಸ್‌ಫಾರ್ಮರ್ ಅನ್ನು ಸ್ಥಳಾಂತರಿಸುವ ಬಗ್ಗೆ.

5. ತುಮಕೂರು ಜಿಲ್ಲೆಯ ಕುಣಿಗಲ್ ಪಟ್ಟಣದಲ್ಲಿ ನಿರ್ಮಿಸಲಾಗುತ್ತಿರುವ ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿ ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಬಗ್ಗೆ.

6. ಕೊಡಗು ಜಿಲ್ಲೆಯ ಪೆರಂಗೆರೆಯಿಂದ ಅರಪಟ್ಟು ಗ್ರಾಮಕ್ಕೆ ಹೋಗುವ ರಸ್ತೆಯ ಮಧ್ಯದಲ್ಲಿ ಅಂತರ್ಜಲ ಉಕ್ಕಿ ಹರಿಯುತ್ತಿರುವುದರಿಂದ ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುತ್ತಿರುವ ಬಗ್ಗೆ.

7. ಭದ್ರಾ ಬಲದಂಡೆ ನಾಲೆಯ ಆಧುನೀಕರಣ ಕಾಮಗಾರಿಯು ಕಳಪೆಯಾಗಿರುವ ಬಗ್ಗೆ.

8. ಬೆಂಗಳೂರು–ಹೈದರಾಬಾದ್ (ಎನ್‌ಹೆಚ್–7) ರಾಷ್ಟ್ರೀಯ ಹೆದ್ದಾರಿಯಲ್ಲಿರುವ ನವಯುಗ ಕಂಪನಿಯ ಟೋಲ್ (ದೇವನಹಳ್ಳಿ)ನಲ್ಲಿ ಅನಾವಶ್ಯಕವಾಗಿ ತೊಂದರೆ ನೀಡುತ್ತಿರುವ ಬಗ್ಗೆ.

4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. **ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಗುರುಪಾಟೀಲ್ ಶಿರವಾಳ್, ಯು.ಬಿ. ಬಣಕಾರ, ಡಾ॥ ವಿಶ್ವನಾಥ ಈ. ಪಾಟೀಲ್ ಮತ್ತು ಪಿ. ರಾಜೀವ್** ಇವರುಗಳು – ರಾಜ್ಯದಲ್ಲಿ ನಗರೋತ್ಥಾನ ಯೋಜನೆ ಅನುಷ್ಠಾನದಲ್ಲಿ ಸಾಕಷ್ಟು ಗೊಂದಲ–ಸಮಸ್ಯೆಗಳು ಉಂಟಾಗಿ ಕಾಮಗಾರಿಗಳು ಪೂರ್ಣಗೊಳ್ಳದೆ ತೊಂದರೆಯಾಗುತ್ತಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2. **ಶ್ರೀಯುತರುಗಳಾದ ಎನ್.ಹೆಚ್. ಕೋನರಡ್ಡಿ, ಕೆ.ಎಂ. ಶಿವಲಿಂಗೇಗೌಡ, ಬಿ. ಆರ್. ಯಾವಗಲ್, ಮತ್ತು ಎಂ.ಜೆ. ಅಪ್ಪಾಜಿ** ಇವರುಗಳು – ಮಹದಾಯಿ ಕಳಸಾ ಬಂಡೂರಿ ನಾಲಾ ಜೋಡಣೆಯ ಯೋಜನೆಯನ್ನು ಜಾರಿಗೆ ತರುವ ವಿಚಾರದಲ್ಲಿ ಹೋರಾಟ ಮಾಡುತ್ತಿದ್ದ ರೈತರ ಮೇಲೆ ದಾಖಲಿಸಲಾಗಿದ್ದ ಮೊಕದ್ದಮೆಗಳನ್ನು ಹಿಂಪಡೆಯದಿರುವುದರಿಂದ ರೈತರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

3. **ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಲಕ್ಷ್ಮಣ್ ಸಂಗಪ್ಪ ಸವದಿ, ಸಂಜಯ ಬಿ, ಪಾಟೀಲ್, ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾ ಸಾಹೇಬ ಮತ್ತು ಶ್ರೀಮತಿ ವೈ. ರಾಮಕ್ಕ** ಹಾಗೂ ಇತರರು – ರಾಜ್ಯದ ನಿಪ್ಪಾಣಿ ವಿಧಾನ ಸಭಾ ಕ್ಷೇತ್ರವು ಸೇರಿದಂತೆ ಹಲವಾರು ಕ್ಷೇತ್ರಗಳ ನಗರ ಸಭೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಸ್ಥಳೀಯ ಶಾಸಕರು ಸೂಚಿಸಿದ ಪ್ರಸ್ತಾವನೆಯನ್ನು ಕಡೆಗಣಿಸಿ ಬದಲಿ ಕಾಮಗಾರಿಗಳಿಗೆ ಅನುಮೋದನೆ ನೀಡಿ ಅನುಷ್ಠಾನಗೊಳಿಸುತ್ತಿರುವುದನ್ನು ತಡೆಗಟ್ಟುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

4. **ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಕೆ.ಎಂ. ಶಿವಲಿಂಗೇಗೌಡ ಮತ್ತು ಹೆಚ್.ಎಸ್. ಪ್ರಕಾಶ್** ಇವರುಗಳು – ತೀವ್ರ ಮಳೆ ಅಭಾವದಿಂದ ಹಾಗೂ ಅಂತರ್ ಜಲ ಕೊರತೆಯಿಂದ ಕುಡಿಯುವ ನೀರಿಗೆ ತುಂಬ ತೊಂದರೆಯಾಗಿರುವ ಹಾಸನ ಜಿಲ್ಲೆಯ 7 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದ್ದರೂ ಸಹ ಹಲವಾರು ಗ್ರಾಮಗಳಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲು ಯಾವುದೇ ಕ್ರಮವನ್ನು ಕೈಗೊಳ್ಳದೇ ಇರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

5. **ಶ್ರೀ ಬಿ.ಆರ್. ಪಾಟೀಲ ಇವರು** – ಆಳಂದ ತಾಲ್ಲೂಕಿನ ನಿಂಬಾಳ, ಕವಲಗಾ ಮತ್ತು ಭೋದನ ಗ್ರಾಮ ಪಂಚಾಯತಿ ವ್ಯಾಪ್ತಿಯ ರೈತರು ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಪಡೆದು ವಿಮೆ ಪ್ರೀಮಿಯಂ ಹಣವನ್ನು ಕಟ್ಟಿದ್ದರೂ ಸಹ ಈವರೆವಿಗೂ ಯಾವುದೇ ರೈತರಿಗೆ ಬೆಳೆ ವಿಮೆ ಸಿಕ್ಕಿಲ್ಲದ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

6. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಎಸ್.ಟಿ. ಸೋಮಶೇಖರ್** ಇವರು – "ನಮ್ಮ ಗ್ರಾಮ ನಮ್ಮ ರಸ್ತೆ" ಯೋಜನೆಯಡಿ ಬೆಂಗಳೂರು ದಕ್ಷಿಣ ತಾಲ್ಲೂಕಿನ ತಟ್ಟಗುಪ್ಪೆ–ತರಳು–ಗುಳಕಮಲೆ ರಸ್ತೆ ಅಭಿವೃದ್ಧಿಗೆ ಮಂಜೂರಾಗಿರುವ ಅನುದಾನದಲ್ಲಿ ಡಾಂಬರು ಕಾಮಗಾರಿ ಕೈಗೊಳ್ಳದೇ ಅಲ್ಲಿನ ಗ್ರಾಮಸ್ಥರುಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

2. **ಶ್ರೀ ಎನ್.ಹೆಚ್. ಕೋನರಡ್ಡಿ** ಇವರು – ಸರ್ಕಾರದ ಘೋಷಣೆಯಂತೆ ರಾಜ್ಯದಲ್ಲಿ ಹೊಸ ತಾಲ್ಲೂಕುಗಳನ್ನು ರಚನೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3. **ಶ್ರೀ ಎನ್. ಚಲುವರಾಯಸ್ವಾಮಿ** ಇವರು – ಮಂಡ್ಯ ಜಿಲ್ಲೆಯಲ್ಲಿ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗಿರುವ ಬಗ್ಗೆ ಹಾಗೂ ಬಹುಗ್ರಾಮ ನೀರಾವರಿ ಯೋಜನೆಯಡಿ ಕುಡಿಯುವ ನೀರಿಗೆ ಶಾಶ್ವತ ಪರಿಹಾರ ಕಲ್ಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಗಮನ ಸೆಳೆಯುವುದು.

4. **ಶ್ರೀ ಪಿ. ರಾಜೀವ್** ಇವರು – ರಾಜ್ಯದಲ್ಲಿ ಪೊಲೀಸರಿಗೆ ನೀಡುತ್ತಿರುವ ಪಡಿತರ ವ್ಯವಸ್ಥೆಯ ಬದಲಿಗೆ ನಗದು ಸಂದಾಯ ಮಾಡುವ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು

5. **ಶ್ರೀ ಶಿವಾನಂದ ಎಸ್. ಪಾಟೀಲ** ಇವರು – ಕೃಷ್ಣಾ ಮೇಲ್ದಂಡೆ ಯೋಜನೆಯ 3ನೇ ಹಂತದ ಆಲಮಟ್ಟಿ ಅಣೆಕಟ್ಟು ಎತ್ತರವನ್ನು ಹೆಚ್ಚಿಸುವುದರಿಂದ ಭೂಸ್ವಾಧೀನ ಪಡಿಸಿಕೊಳ್ಳಲಾಗುತ್ತಿರುವ ಜಮೀನಿಗೆ 2013ರ ಹೊಸ ಭೂಸ್ವಾಧೀನ ಕಾಯಿದೆ ಅನ್ವಯ ಪರಿಹಾರ ನೀಡುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

6. **ಶ್ರೀ ಹೆಚ್.ಡಿ. ರೇವಣ್ಣ** ಇವರು – ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಶಿಥಿಲಗೊಂಡಿರುವ ಪುರಾತನ ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಹಣ ಮಂಜೂರು ಮಾಡುವ ಬಗ್ಗೆ ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರ ಗಮನ ಸೆಳೆಯುವುದು.

7. **ಶ್ರೀ ವೈ.ಎ. ನಾರಾಯಣಸ್ವಾಮಿ** ಇವರು – ಬೆಂಗಳೂರು ನಗರದ ಹೆಬ್ಬಾಳ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಾದು ಹೋಗುವ ಹೆಬ್ಬಾಳ ವ್ಯಾಲಿಯಲ್ಲಿ ಕಸ ತ್ಯಾಜ್ಯಗಳಿಂದ ತುಂಬಿ ಕೆಟ್ಟ ವಾಸನೆ ಬರುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

8. **ಶ್ರೀ ಡಾ॥ ರಫೀಕ್ ಅಹ್ಮದ್ ಎಸ್.** ಇವರು – ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ 2016–17ನೇ ODD Semester ನ ಪರೀಕ್ಷೆಗಳು ಒಂದು ತಿಂಗಳು ಹಿಂದೆಯೇ ಮುಗಿದಿದ್ದರೂ, ಇದುವರೆವಿಗೂ ಮೌಲ್ಯಮಾಪನ ಪ್ರಾರಂಭವಾಗದೇ ಇರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

9. **ಶ್ರೀ ಕೆ. ಅಭಯ ಚಂದ್ರ** ಇವರು – ಮೂಡಬಿದರೆ ಪುರಸಭೆ ವ್ಯಾಪ್ತಿಯ ವುಚ್ಚಮಗೂರಿನಲ್ಲಿ ಯುಜಿಡಿ ವ್ಯವಸ್ಥೆಯನ್ನು ಜಾರಿಗೆ ತರುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

10. **ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ** ಇವರು – ಮಧುಗಿರಿ ತಾಲ್ಲೂಕಿನ ಸರ್ಕಾರಿ ಪ್ರೌಢಶಾಲೆಯಲ್ಲಿ Computer Training ವ್ಯವಸ್ಥೆ ಸಮರ್ಪಕವಾಗಿಲ್ಲದಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

11. **ಶ್ರೀ ಅರವಿಂದ ಚಂದ್ರಕಾಂತ ಬೆಲ್ಲದ** ಇವರು – ಹುಬ್ಬಳ್ಳಿ–ಧಾರವಾಡ ಬೈಪಾಸ್‌ನಲ್ಲಿರುವ ರಮ್ಯ ರೆಸಿಡೆನ್ಸಿ ಹೋಟೆಲ್‌ನಲ್ಲಿ ನಡೆಯುತ್ತಿರುವ ಕಾನೂನು ಬಾಹಿರವಾದ ಇಸ್ಪೀಟ್ ಆಟ ಹಾಗೂ ಬಡ್ಡಿ ವ್ಯವಹಾರದ ದಂಧೆಯ ಮೇಲೆ ಕ್ರಮ ತೆಗೆದುಕೊಳ್ಳುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

12.ಶ್ರೀ ಕೆ. ಅಭಯ ಚಂದ್ರ ಇವರು – ರಾಜ್ಯ ಕುಡುಬಿ ಜನಾಂಗವನ್ನು ಪರಿಶಿಷ್ಟ ವರ್ಗಕ್ಕೆ ಸೇರ್ಪಡೆಗೊಳಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

13.ಶ್ರೀ ಜಿ.ಹೆಚ್. ಶ್ರೀನಿವಾಸ್ ಇವರು – ಭದ್ರಾ ಮೇಲ್ದಂಡೆ ಯೋಜನೆಯಡಿ ತರೀಕೆರೆ ವಿಧಾನಸಭಾ ಕ್ಷೇತ್ರದ 79 ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಯು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸಳೆಯುವುದು.

14.ಶ್ರೀ ವಿ. ಸುನೀಲ್ ಕುಮಾರ್ ಇವರು – ಕಾರ್ಕಳ ತಾಲ್ಲೂಕಿನ ಗ್ರಾಮೀಣ ಭಾಗದಲ್ಲಿ ಹಾಗೂ ಅರಣ್ಯ ಅಂಚಿನಲ್ಲಿರುವ ಗ್ರಾಮಗಳಲ್ಲಿ ಗ್ರಾಮೀಣ ಸಾರಿಗೆ ವ್ಯವಸ್ಥೆ ಕಲ್ಪಿಸುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

15.ಶ್ರೀ ಹೆಚ್.ಡಿ. ರೇವಣ್ಣ ಇವರು – ಹೊಳೆನರಸೀಪುರ ತಾಲ್ಲೂಕಿನಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಶ್ರೀ ಹೆಚ್.ಡಿ. ದೇವೇಗೌಡ ಸಂಶೋಧನಾ ಅಧ್ಯಯನ ಕೇಂದ್ರವನ್ನು ಆರಂಭಿಸಲು ಆದೇಶವಿದ್ದರೂ ಸಹ ಈವರೆವಿಗೂ ಕ್ರಮ ಕೈಗೊಳ್ಳದಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

16.ಶ್ರೀ ಕೆ.ಎಂ. ಶಿವಲಿಂಗೇಗೌಡ ಮತ್ತು ಶ್ರೀ ಹೆಚ್.ಡಿ. ರೇವಣ್ಣ ಇವರುಗಳು – ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕು, ದಂಡಿಗನಹಳ್ಳಿ ಹೋಬಳಿಯ ಉದಯಪುರ ಸರ್ಕಾರಿ ಐ.ಟಿ.ಐ. ಕಾಲೇಜಿನ ಕಟ್ಟಡ ನಿರ್ಮಾಣಕ್ಕಾಗಿ ಅವಶ್ಯಕ ಅನುದಾನ ನೀಡುವಂತೆ ನಿರ್ದೇಶನವಿದ್ದರೂ ಸಹ ಈವರೆವಿಗೂ ಯಾವುದೇ ಕ್ರಮ ಕೈಗೊಳ್ಳದಿರುವ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

17.ಶ್ರೀ ಕೆ.ಜಿ. ಬೋಪಯ್ಯ ಇವರು – ಕೊಡವ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನವನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

18. **ಶ್ರೀ ಎಂ.ಪಿ. ಅಪ್ಪಚ್ಚು (ರಂಜನ್) ಮತ್ತು ಶ್ರೀ ಕೆ.ಜಿ.ಬೋಪಯ್ಯ** ಇವರುಗಳು – ಕೊಡಗು ಜಿಲ್ಲೆ, ಮಡಿಕೇರಿ ತಾಲ್ಲೂಕಿನ ಹುದ್ದೂರು ಗ್ರಾಮದ ಸರ್ವೆ ನಂ. 267/2ಎ ಯಲ್ಲಿ ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್‌ರವರು ಸ್ಟೇಡಿಯಂ ನಿರ್ಮಿಸುವುದಕ್ಕೆ ಸೂಕ್ತ ರಕ್ಷಣೆ ಒದಗಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

19. **ಶ್ರೀ ಶಿವಾನಂದ ಎಸ್. ಪಾಟೀಲ** ಇವರು – ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ಮತ್ತು ಮುದ್ದೇಬಿಹಾಳ ತಾಲ್ಲೂಕಿನ ರೈತರಿಗೆ ಈರುಳ್ಳಿ ಗೋದಾಮು ನಿರ್ಮಿಸಲು ನೀಡಿರುವ ಸಾಲದ ಅಸಲು ಹಾಗೂ ಬಡ್ಡಿ ಮನ್ನಾ ಮಾಡುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

20. **ಶ್ರೀಯುತರುಗಳಾದ ಸಾ.ರಾ. ಮಹೇಶ್, ಹೆಚ್.ಪಿ. ಮಂಜುನಾಥ್ ಹಾಗೂ ಎಸ್. ಚಿಕ್ಕಮಾದು** ಇವರುಗಳು – 2017–18ನೇ ಶೈಕ್ಷಣಿಕ ಸಾಲಿನಲ್ಲಿ ಹುಣಸೂರು ತಾಲ್ಲೂಕನ್ನು ಶೈಕ್ಷಣಿಕ ಜಿಲ್ಲೆಯನ್ನಾಗಿ ಘೋಷಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

21. **ಶ್ರೀ ಬಿ.ಆರ್. ಪಾಟೀಲ್** ಇವರು – ಆಳಂದ ತಾಲ್ಲೂಕಿನಲ್ಲಿ ಕುಡಿಯುವ ನೀರನ್ನು ಟ್ಯಾಂಕರ್‌ಗಳಿಂದ ಸರಬರಾಜು ಮಾಡಿದ ಟ್ಯಾಂಕರ್‌ಗಳ ಮಾಲೀಕರಿಗೆ ಹಣ ಪಾವತಿ ಮಾಡುವ ಬಗ್ಗೆ ಮಾನ್ಯ ಕಂದಾಯ ಇಲಾಖೆ ಸಚಿವರ ಗಮನ ಸೆಳೆಯುವುದು.

22. **ಶ್ರೀ ಎಂ. ಕೃಷ್ಣಾರೆಡ್ಡಿ** ಇವರು – ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ನಗರದಲ್ಲಿರುವ ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಅನಧಿಕೃತವಾಗಿ ನಿರ್ಮಾಣ ಮಾಡಿರುವ ವಾಣಿಜ್ಯ ಕಟ್ಟಡಗಳನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

23. **ಶ್ರೀ ಆರ್. ಅಖಂಡ ಶ್ರೀನಿವಾಸಮೂರ್ತಿ** ಇವರು – ಪುಲಕೇಶಿನಗರ ವಿಧಾನಸಭಾ ಕ್ಷೇತ್ರದ ದೇವರಜೀವನಹಳ್ಳಿ ವಾರ್ಡ್ ನಂ.47 ರಲ್ಲಿ ಮೋದಿ ಗಾರ್ಡನ್ ಏರಿಯಾದಲ್ಲಿ ಕೇಂದ್ರ ರಕ್ಷಣಾ ಇಲಾಖೆಯ ಅಧೀನದಲ್ಲಿರುವ ರಸ್ತೆಯ ದುರಸ್ಥಿ ಮತ್ತು ಡಾಂಬರೀಕರಣ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

24. **ಶ್ರೀ ಹೆಚ್.ಡಿ. ರೇವಣ್ಣ ಮತ್ತು ಶ್ರೀ ಹೆಚ್.ಎಸ್. ಪ್ರಕಾಶ್** ಇವರುಗಳು – ಸರ್ಕಾರಿ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ವಿಶ್ವಬ್ಯಾಂಕಿನ ನೆರವನ್ನು ಪಡೆದು 2017–18ನೇ ಸಾಲಿನ ಆಯ–ವ್ಯಯದಲ್ಲಿ ಅನುದಾನವನ್ನು ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

25. **ಶ್ರೀಯುತರುಗಳಾದ ಹೆಚ್.ಎಸ್. ಪ್ರಕಾಶ್, ಹೆಚ್.ಡಿ. ರೇವಣ್ಣ ಮತ್ತು ಹೆಚ್.ಕೆ. ಕುಮಾರಸ್ವಾಮಿ** ಇವರುಗಳು – ಚಿಕ್ಕಮಗಳೂರು ತಾಲ್ಲೂಕಿನ ಈಶ್ವರಹಳ್ಳಿ ಗ್ರಾಮದಲ್ಲಿ ಪರವಾನಗಿ ಪಡೆದ ಪ್ರದೇಶವನ್ನು ಬಿಟ್ಟು ಬೇರೆ ಕಡೆ ಮಾಡುತ್ತಿರುವ ಅಕ್ರಮ ಗಣಿಗಾರಿಕೆಯಿಂದ ಸರ್ಕಾರಕ್ಕೆ ನಷ್ಟ ಉಂಟುಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರ ಗಮನ ಸೆಳೆಯುವುದು.

26. **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ ಮತ್ತು ಹೆಚ್.ಎಸ್. ಪ್ರಕಾಶ್** ಇವರುಗಳು – ಹಾಸನ ಜಿಲ್ಲೆಯಲ್ಲಿ ರಾಷ್ಟ್ರೀಯ ಮಾದ್ಯಮಿಕ ಶಿಕ್ಷಣ ಅಭಿಯಾನ ಯೋಜನೆಯಡಿ ಬಾಕಿ ಇರುವ ಸರ್ಕಾರಿ ಪ್ರೌಢ ಶಾಲೆಗಳ ನಿರ್ಮಾಣ ಕಾಮಗಾರಿಗಳನ್ನು ಪ್ರಾರಂಭ ಮಾಡದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

27. **ಡಾ॥ ನಾರಾಯಣಗೌಡ** ಇವರು – ಮಂಡ್ಯ ಜಿಲ್ಲೆ, ಕೆ.ಆರ್.ಪೇಟೆ ತಾಲ್ಲೂಕಿನ ಮುರುಕನ ಹಳ್ಳಿಯಲ್ಲಿ ನಡೆದ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸೂಕ್ತ ರೀತಿಯಲ್ಲಿ ಕ್ರಮಕೈಗೊಳ್ಳದೇ ಕರ್ತವ್ಯ ಲೋಪವೆಸಗಿರುವ ಡಿ.ವೈ.ಎಸ್.ಪಿ. ಅವರನ್ನು ಅಮಾನತ್ತುಗೊಳಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm